

ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕಲಘಟಗಿ ಶಾಸಕ ಸಿ.ಎಂ. ನಿಂಬಣ್ಣವರ ಅವರು ಕಲಘಟಗಿಯ ಪ್ರಸಿದ್ಧ ಸಾಂಪ್ರದಾಯಿಕ ತೊಟ್ಟಿಲು ಉಡುಗೊರೆ ನೀಡಿದರು.

# ಪ್ರಜಾಪ್ರಭುತ್ವಕ್ಕೆ ಅಪಾಯ ಎಂದವರಿಂದ ದೂರವಿರಿ

**ಮೂ**ಲಸೌಕರ್ಯಗಳ ಅಭಿವೃದ್ಧಿಯಲ್ಲಿ ಕೇಂದ್ರ ಸರ್ಕಾರದ ನಿರಂತರ ಬದ್ಧತೆಯನ್ನು ಜನತೆಯ ಮುಂದಿಟ್ಟ ಪ್ರಧಾನಿ ನರೇಂದ್ರ ಮೋದಿ, ಪರೋಕ್ಷವಾಗಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಮೊನಚು ಮಾತುಗಳಿಂದ ತಿವಿದರು. ಅನುಭವ ಮಂಟಪದ ಮೂಲಕ ಜಗತ್ತಿಗೆ ಸಂಸತ್ ಪರಿಕಲ್ಪನೆಯನ್ನು ನೀಡಿದ ಬಸವೇಶ್ವರರ ಪ್ರತಿಮೆಯನ್ನು ಲಂಡನ್‌ನಲ್ಲಿ ಅನಾವರಣಗೊಳಿಸುವ ಅವಕಾಶ ನನಗೆ ಲಭಿಸಿತ್ತು. ಆದರೆ, ಅದೇ ನೆಲದಲ್ಲಿ ನಿಂತು ಕೆಲವರು ಭಾರತದ ಪ್ರಜಾಪ್ರಭುತ್ವವನ್ನು ಟೀಕಿಸಿದ್ದಾರೆ ಎಂದರು. ಭಾನುವಾರ ಸಂಜೆ ಧಾರವಾಡದಲ್ಲಿ ಐಐಟಿ ಸೇರಿ ವಿವಿಧ ಮೂಲಸೌಕರ್ಯಗಳ ಲೋಕಾರ್ಪಣೆ ನೆರವೇರಿಸಿದ ಪ್ರಧಾನಿ ಭಾಷಣದಲ್ಲಿ ರಾಹುಲ್ ಗಾಂಧಿ ಹೆಸರನ್ನು ಉಲ್ಲೇಖಿಸದಿದ್ದರೂ 'ಭಾರತದಲ್ಲಿ ಪ್ರಜಾಪ್ರಭುತ್ವ ಅಪಾಯದಲ್ಲಿದೆ' ಎಂದು ಹೇಳಿ ಬಸವೇಶ್ವರರನ್ನು ಹಾಗೂ ದೇಶದ 140 ಕೋಟಿ ಜನರನ್ನು ಅವಮಾನಿಸಿದ್ದಾರೆ. ಇಂಥವರಿಂದ ರಾಜ್ಯದ ಜನತೆ ಎಚ್ಚರಿಕೆಯಿಂದ ಇರಬೇಕು ಎಂದರು. ಆ ಮೂಲಕ ಮತ್ತೊಮ್ಮೆ ಲಿಂಗಾಯತ ಮತಗಳನ್ನು ಸೆಳೆಯುವ ಯತ್ನ ನಡೆಸಿದರು.



ಐಐಟಿ ಕ್ಯಾಂಪಸ್ ಉದ್ಘಾಟಿಸಿದ ಪ್ರಧಾನಿ ಮೋದಿ, ಮುಖ್ಯಮಂತ್ರಿ ಬೊಮ್ಮಾಯಿ, ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ಸಚಿವ ಗೋವಿಂದ ಕಾರಜೋಳ, ಸಭಾಪತಿ ಬಸವರಾಜ ಹೊರಟ್ಟಿ ಇದ್ದರು.

## ವಿದ್ಯಾಕಾಶಿಯಲ್ಲಿ ಶಿಕ್ಷಣ ಮಂತ್ರ

- ಶಿಕ್ಷಣ, ಸಾಹಿತ್ಯ, ಕಲೆ, ಸಂಗೀತ ನೆಲೆವೀಡು, ರಾಜ್ಯದ ಗೇಟ್‌ವೇ
- ಅತ್ಯುತ್ಕೃಷ್ಟ ವಿದ್ಯಾಸಂಸ್ಥೆ, ಗುಣಮಟ್ಟದ ಶಿಕ್ಷಣ ಸುಗಮ ಜೀವನ
- ಏಮ್ಸ್, ಐಐಎಂ, ಐಐಟಿ ಸಂಸ್ಥೆಗಳನ್ನು ಹೆಚ್ಚಿಸಿ ಯುವಜನರ ಆಶೋತ್ತರಗಳಿಗೆ ಸ್ಪಂದನೆ
- ವೈದ್ಯಕೀಯ ಕಾಲೇಜುಗಳು, ವೃತ್ತಿಪರ ಸಂಸ್ಥೆಗಳ ಏರಿಕೆಯಿಂದ ಸ್ವಾಸ್ಥ್ಯ, ಉದ್ಯೋಗಕ್ಕೆ ದಾರಿ
- ಅಗ್ಗದ ಇಂಟರ್ನೆಟ್ ಸೇವೆ ಡಿಜಿಟಲ್ ಕ್ರಾಂತಿಗೆ ಕಾರಣ, ಯುವಜನರ ಸಬಲೀಕರಣ
- ಶಿಕ್ಷಣ ಸೇರಿ ಮೂಲಸೌಲಭ್ಯ ಸುಧಾರಣೆಯಿಂದ ಆರ್ಥಿಕತೆ, ಜನರ ಜೀವನಮಟ್ಟ ಉತ್ತಮ

# ಉತ್ತಮ ಶಿಕ್ಷಣ ಸಂಸ್ಥೆಗಳ ಸ್ಥಾಪನೆಗೆ ಆದ್ಯತೆ: ಮೋದಿ

ಉದಯಕಾಲ ನ್ಯೂಸ್

**ಧಾರವಾಡ:** ಉತ್ತಮ ಶಿಕ್ಷಣವು ಪ್ರತಿಯೊಬ್ಬರಿಗೆ ದೊರಕಬೇಕಿದೆ. ಉತ್ತಮ ಶಿಕ್ಷಣ ಸಂಸ್ಥೆ ಆರಂಭಿಸಿದಷ್ಟು ಉತ್ತಮ ಶಿಕ್ಷಣ ದೊರಕುವುದು ಸಾಧ್ಯವಾಗಲಿದೆ. ಆದ್ದರಿಂದ ಉತ್ತಮ ಶಿಕ್ಷಣ ಸಂಸ್ಥೆ ಸ್ಥಾಪನೆಗೆ ಸರಕಾರ ಆದ್ಯತೆ ನೀಡಿದೆ. ದೇಶದಲ್ಲಿ ಕಳೆದ 9 ವರ್ಷಗಳಿಂದ ಆಧುನೀಕರಣಕ್ಕೆ ಒತ್ತು ನೀಡಲಾಗಿದೆ. ಗ್ರಾಮೀಣ ರಸ್ತೆ ಮಾತ್ರವಲ್ಲದೆ ರಾಷ್ಟ್ರೀಯ ಹೆದ್ದಾರಿಗಳ ಅಭಿವೃದ್ಧಿ, ರೈಲು ಮಾರ್ಗಗಳ ವಿಸ್ತರಣೆ ಹಾಗೂ ವಿಮಾನ ನಿಲ್ದಾಣಗಳನ್ನು ಅಭಿವೃದ್ಧಿಪಡಿಸಲಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದರು.

ಇಲ್ಲಿನ ಚಿಕ್ಕಮಲ್ಲಿಗವಾಡದಲ್ಲಿ ನಿರ್ಮಾಣವಾಗಿರುವ ಭಾರತೀಯ ತಂತ್ರಜ್ಞಾನ ಸಂಸ್ಥೆ(ಐಐಟಿ) ನೂತನ ಕಟ್ಟಡ ಉದ್ಘಾಟಿಸಿ, ವಿವಿಧ ಯೋಜನೆಗಳ ಲೋಕಾರ್ಪಣೆ ಮಾಡಿ ಮಾತನಾಡಿದರು. ಜಗದ್ಗುರು ಬಸವೇಶ್ವರ ಅವರಿಗೆ ನನ್ನ ನಮಸ್ಕಾರಗಳು. ಕಲೆ, ಸಾಹಿತ್ಯ ಮತ್ತು ಸಂಸ್ಕೃತಿಯ ಈ ನಾಡಿನ ಸಹೋದರ ಸಹೋದರಿಯರಿಗೆ ನನ್ನ ನಮಸ್ಕಾರಗಳು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಮಾತು ಆರಂಭಿಸಿದರು.

ಹುಬ್ಬಳ್ಳಿ, ಬೆಳಗಾವಿ, ಕಲಬುರ್ಗಿ ಮತ್ತಿತರ ಕಡೆಗಳಲ್ಲಿ ರೋಡ್ ಶೋ ಸಂದರ್ಭದಲ್ಲಿ ನೀಡಿದ ಅದ್ಭುತ ಪ್ರೀತಿ ಮತ್ತು ಆಕ್ಷಣ ಮರೆಯಲಾಗದು. ಜನರು ಪ್ರೀತಿ ಮತ್ತು ಆಶೀರ್ವಾದವು ನನ್ನ ಮೇಲಿನ ದೊಡ್ಡ ಋಣವಾಗಿದೆ. ನಿರಂತರ ಸೇವೆಯ ಮೂಲಕ ಕರ್ನಾಟಕ ಜನರ ಈ ಋಣವನ್ನು ತೀರಿಸುತ್ತೇನೆ ಎಂದು ಪ್ರಧಾನಮಂತ್ರಿ ಭರವಸೆ ನೀಡಿದರು.

ಡಬಲ್ ಎಂಜಿನ್ ಸರಕಾರವು ರಾಜ್ಯದ ಹಳ್ಳಿ ಹಳ್ಳಿಗಳ ಸಮಗ್ರ ಪ್ರಗತಿಗೆ ಬದ್ಧವಾಗಿದೆ. ಪ್ರಗತಿಯ ಹೊಸ ಶಕೆಯು ಇಡಿ ರಾಜ್ಯದ ಪ್ರಗತಿಗೆ ಮುನ್ನುಡಿ ಬರೆಯಲಿದೆ. ಐಐಟಿಯ ಹೊಸ ಕ್ಯಾಂಪಸ್ ಧಾರವಾಡದ ಪರಿಚಯವನ್ನು ಮತ್ತಷ್ಟು ಬಲಗೊಳಿಸಲಿದೆ. ಕರ್ನಾಟಕದ ವಿಕಾಸದಲ್ಲಿ ಐಐಟಿ ಹೊಸ ಅಧ್ಯಯವಾಗಲಿದೆ. ಇಲ್ಲಿನ ಮೂಲ ಸೌಕರ್ಯಗಳು ಈ ಸಂಸ್ಥೆಯನ್ನು ವಿಶ್ವದ ಮುನ್ನೆಲೆಗೆ ತರಲಿವೆ. ಐಐಟಿ ಸಂಸ್ಥೆಯು ಬಿಜೆಪಿ ಸರಕಾರದ ಸಂಕಲ್ಪದ ಸಿದ್ಧಿಯಾಗಿದೆ. ಶಂಕುಸ್ಥಾಪನೆ ನೆರವೇರಿಸಿದ ನಾಲ್ಕು ವರ್ಷಗಳಿಂದ ಡಬಲ್ ಎಂಜಿನ್ ಸರಕಾರವು ಅದೇ ವೇಗದಲ್ಲಿ ನಡೆದಿದೆ. ಶಂಕುಸ್ಥಾಪನೆ ನೆರವೇರಿಸಿ ಮರೆತುಬಿಡುವ ಕಾಲ ಹೋಯಿತು. ನಾವೇ ಶಂಕುಸ್ಥಾಪನೆ ನೆರವೇರಿಸಿ ನಾವೇ ಲೋಕಾರ್ಪಣೆ ಮಾಡುವುದು ನಮ್ಮ ಬದ್ಧತೆಯಾಗಿದೆ.

ದೇಶದಲ್ಲಿ ಕೇವಲ 380 ವೈದ್ಯಕೀಯ ಕಾಲೇಜುಗಳಿದ್ದವು 9 ವರ್ಷಗಳಲ್ಲಿ 250 ಕಾಲೇಜು ಸ್ಥಾಪಿಸಲಾಗಿದೆ. ಇದೇ ರೀತಿ ಐಐಟಿಗಳನ್ನು ಕೂಡ ಹೆಚ್ಚಿನ ಸಂಖ್ಯೆಯಲ್ಲಿ ಆರಂಭಿಸಲಾಗಿದೆ. ಮುಂದಿನ ದಿನಗಳಲ್ಲಿ ಹುಬ್ಬಳ್ಳಿ-ಧಾರವಾಡ ನಗರಗಳು ಅಭಿವೃದ್ಧಿಯ ತುತ್ತತುದಿಗೆ ತಲುಪಲಿವೆ. ಜಯದೇವ ಹೃದ್ರೋಗ ಆಸ್ಪತ್ರೆ ಆರಂಭದಿಂದ ಈ ಭಾಗದ ಜನರಿಗೆ ಉತ್ತಮ ಚಿಕಿತ್ಸೆ ಲಭಿಸಲಿದೆ.

ಪುಟ 02



# ವಿದೇಶದಲ್ಲಿ ಭಾರತಕ್ಕೆ ಅಪಮಾನ

ಧಾರವಾಡ: 'ಪ್ರಜಾಸತ್ತೆಯ ಜೊತೆಗೆ ಈ ಭವ್ಯ ದೇಶದ ಜನರನ್ನು ಅವಹೇಳನ ಮಾಡಿದ್ದಾರೆ. ಇದು ಅಕ್ಷಮ್ಯ. ಲಂಡನ್‌ನಲ್ಲಿ ಆಡಿದ ಮಾತುಗಳು ನಮ್ಮ ಪ್ರಜಾಪ್ರಭುತ್ವಕ್ಕೆ ನೀಡಿರುವ 'ಕೊಡಲಿ ಏಟು' ಎಂದು ಪ್ರಧಾನಿ ನರೇಂದ್ರ ಮೋದಿ ಭಾನುವಾರ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹೆಸರು ಹೇಳದೇ ತರಾಟೆಗೆ ತೆಗೆದುಕೊಂಡರು.

ಧಾರವಾಡ ಐಐಟಿ ಕ್ಯಾಂಪಸ್‌ಅನ್ನು ಲೋಕಾರ್ಪಣೆ ಮಾಡಿ ಮಾತನಾಡಿದ ಅವರು, 'ಬಸವಣ್ಣನವರು ಅನುಭವ ಮಂಟಪದ ಮೂಲಕ ವಿಶ್ವಕ್ಕೇ ಜನಸತ್ತೆಯ ಪರಿಕಲ್ಪನೆ ನೀಡಿದವರು. ಭಾರತ ಪ್ರಜಾಪ್ರಭುತ್ವದ ತಾಯಿ ಎಂಬುದನ್ನು ಇದು ತೋರಿಸುತ್ತದೆ. ತಮ್ಮ ಮಾತುಗಳಿಂದ ಬಸವಣ್ಣ ಮತ್ತು ಭಾರತ ಮಾತೆ ಇಬ್ಬರನ್ನೂ ಅವಮಾನಿಸಿದ್ದಾರೆ. ಜನ ಪಾಠ ಕಲಿಸುತ್ತಾರೆ' ಎಂದು ಗುಡುಗಿದರು.

ರಾಹುಲ್ ಮಾತಿಗೆ ಪ್ರಧಾನಿ ಮೋದಿ ಮೊದಲ ಬಾರಿಗೆ ಸಾರ್ವಜನಿಕ ರ್‍ಯಾಲಿಯಲ್ಲಿ ನೀಡಿರುವ ಪ್ರತಿಕ್ರಿಯೆ ಇದಾಗಿರುವುದರಿಂದ ಗಮನ ಸೆಳೆಯಿತು.



ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕಲಘಟಗಿ ಶಾಸಕ ಸಿ.ಎಂ. ನಿಂಬಣ್ಣವರ ಅವರು ಕಲಘಟಗಿಯ ಪ್ರಸಿದ್ಧ ಸಾಂಪ್ರದಾಯಿಕ ತೊಟ್ಟಿಲು ಉಡುಗೊರೆ ನೀಡಿದರು.

ಇವರ ಪೂರ್ವಜರು ರಾಜಕೀಯ ಲಾಭ ನಷ್ಟದ ಲೆಕ್ಕಾಚಾರ ಹಾಕಿ ರಸ್ತೆ, ರೈಲು, ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸುತ್ತಿದ್ದರು ಎಂದೂ ಮೋದಿ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು. ಹೆಜ್ಜೆ ಹೆಜ್ಜೆಗೂ ಪ್ರತಿಪಕ್ಷವನ್ನು ಪರೋಕ್ಷವಾಗಿ ಟೀಕಿಸಿದರು, ಲೇವಡಿ ಮಾಡಿದರು.







ವೇದಿಕೆಗೆ ಆಗಮಿಸಿದ ಪ್ರಧಾನಿ ಮೋದಿ ಪ್ರೇಕ್ಷಕರತ್ತ ಕೈಬೀಸಿದರು.ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಸನ್ಮಾನಿಸಿದರು. ಧಾರವಾಡದ ಮುಮ್ಮಿಗಟ್ಟಿಯಲ್ಲಿ ನಡೆದ ಐಐಟಿ ಉದ್ಘಾಟನೆ ಕಾರ್ಯಕ್ರಮದ ವೇದಿಕೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಮಾತನ್ನು ನಗುಮುಖದಿಂದ ಆಲಿಸುತ್ತಿರುವ ಕೇಂದ್ರ ಸಚಿವ ಪ್ರಲ್ಹಾದ ಜೋಶಿ.

# ರಾಜ್ಯದ ಮೊದಲ ಎಕ್ಸ್‌ಪ್ರೆಸ್‌ವೇ, ದೇಶದ ಮೊದಲ ಹಸಿರು ಐಐಟಿ, ವಿಶ್ವದ ಅತಿ ಉದ್ದದ ರೈಲ್ವೆ ಪ್ಲಾಟ್‌ಫಾರ್ಮ್‌ಗೆ ಮೋದಿ ಚಾಲನೆ

## ಮಂಡ್ಯ, ಧಾರವಾಡದಲ್ಲಿ 17 ಸಾವಿರ ಕೋಟಿ ರು. ವೆಚ್ಚದ ಕಾಮಗಾರಿ ಉದ್ಘಾಟಿಸಿದ ಪ್ರಧಾನಿ | ಹೊಸಪೇಟೆ ರೈಲು ನಿಲ್ದಾಣಕ್ಕೂ ಚಾಲನೆ

• **ಕನ್ನಡಪ್ರಭ ವಾರ್ತೆ** ಮಂಡ್ಯ/ಹುಬ್ಬಳ್ಳಿ

ಮುಂಬರುವ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಭರ್ಜರಿ ಪ್ರಚಾರಕ್ಕೆ ಮುಂದಾಗಿರುವ ಪ್ರಧಾನಿ ನರೇಂದ್ರ ಮೋದಿಯವರು ಭಾನುವಾರ ಮಂಡ್ಯ ಹಾಗೂ ಧಾರವಾಡಕ್ಕೆ ಆಗಮಿಸಿ, ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು. ಬೆಳಗ್ಗೆ 11.40ಕ್ಕೆ ಮೈಸೂರಿನಿಂದ ಹೆಲಿಕಾಪ್ಟರ್ ಮೂಲಕ ಮಂಡ್ಯಕ್ಕೆ ಆಗಮಿಸಿದ ಮೋದಿ, ಪ್ರವಾಸಿ ಮಂದಿರದಿಂದ ಎಸ್.ಡಿ.ಜಯರಾಂ ವೃತ್ತದವರೆಗೆ 1.8 ಕಿ.ಮೀ. ದೂರ ಬೃಹತ್ ರೋಡ್ ಶೋ ನಡೆಸಿದರು. ಬಳಿಕ, ಕಾರಿನ ಮೂಲಕ ದಶಪಥ ಹೈವೇ ಉದ್ಘಾಟನಾ ಸಮಾರಂಭ ನಿಗದಿಯಾಗಿದ್ದ ಗೆಜ್ಜಲಗೆರೆ ಕಾಲೋನಿಗೆ ಪ್ರಯಾಣ ಬೆಳೆಸಿದರು. ಮದ್ದೂರು ತಾಲೂಕಿನ ಗೆಜ್ಜಲಗೆರೆಯಲ್ಲಿ 'ರಾಜ್ಯದ ಮೊದಲ ಎಕ್ಸ್‌ಪ್ರೆಸ್ ವೇ' ಎಂಬ ಅಭಿದಾನಕ್ಕೆ ಪಾತ್ರವಾಗಿರುವ, 8,480 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಂಡಿರುವ 117 ಕಿ.ಮೀ ಉದ್ದದ ಬೆಂಗಳೂರು-ಮೈಸೂರು ದಶಪಥ ಹೆದ್ದಾರಿಯನ್ನು ಲೋಕಾರ್ಪಣೆಗೊಳಿಸಿದರು. ಬಳಿಕ, ಮೈಸೂರು-ಕುಶಾಲನಗರ ಚತುಷ್ಪಥ ಕಾಮಗಾರಿಗೆ ಶಂಕುಸ್ಥಾಪನೆ ಸೇರಿದಂತೆ 12,000 ಕೋಟಿಗೂ ಅಧಿಕ ಮೌಲ್ಯದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು.


ಹುಬ್ಬಳ್ಳಿಯಲ್ಲಿ ನಿರ್ಮಿಸಿರುವ ವಿಶ್ವದ ಅತಿ ಉದ್ದದ ರೈಲ್ವೆ ಪ್ಲಾಟ್‌ಫಾರ್ಮ್ ಉದ್ಘಾಟಿಸಿದ ಮೋದಿ.

ಮಧ್ಯಾಹ್ನ 4.10ಕ್ಕೆ ಧಾರವಾಡಕ್ಕೆ ಆಗಮಿಸಿದ ಮೋದಿ, ಧಾರವಾಡದ ಚಿಕ್ಕಮಲ್ಲಿಗವಾಡದಲ್ಲಿ 852 ಕೋಟಿ ರು.ವೆಚ್ಚದಲ್ಲಿ ನಿರ್ಮಾಣಗೊಂಡಿರುವ ಐಐಟಿಯ ಕ್ಯಾಂಪಸ್‌ನ್ನು ಲೋಕಾರ್ಪಣೆಗೊಳಿಸಿದರು. ರಾಜ್ಯದ ಮೊದಲ ಹಾಗೂ ದೇಶದ ಪ್ರಪ್ರಥಮ ಹಸಿರು ಐಐಟಿ ಎಂಬ ಖ್ಯಾತಿಗೆ ಇದು ಒಳಗಾಗಿದೆ. ಬಳಿಕ, ಇದೇ ವೇದಿಕೆಯಲ್ಲಿ 'ಶ್ರೀ ಸಿದ್ಧಾರೂಢ ಸ್ವಾಮೀಜಿ ರೈಲ್ವೆ ನಿಲ್ದಾಣ'ದಲ್ಲಿ ನಿರ್ಮಾಣವಾಗಿರುವ 1.5 ಕಿ.ಮೀ. ಉದ್ದದ 'ವಿಶ್ವದ ಅತಿ ಉದ್ದದ ರೈಲ್ವೆ ಪ್ಲಾಟ್‌ಫಾರ್ಮ್'ನ್ನು ಲೋಕಾರ್ಪಣೆಗೊಳಿಸಿದರು. ಜೊತೆಗೆ, ಹಂಪಿ ಸ್ಮಾರಕ ಮಾದರಿಯ ಹೊಸಪೇಟೆ ರೈಲು ನಿಲ್ದಾಣಕ್ಕೂ ಚಾಲನೆ ನೀಡಿದರು. ಇದೇ ವೇಳೆ, ಹುಬ್ಬಳ್ಳಿ ಧಾರವಾಡ ಸ್ಮಾರ್ಟ್ ಸಿಟಿ ಸೇರಿ 5,000 ಕೋಟಿಗೂ ಅಧಿಕ ವೆಚ್ಚದ ಕಾಮಗಾರಿಗಳಿಗೆ ಚಾಲನೆ ನೀಡಿದರು.

**ಮೋದಿಗೆ ಅದ್ದೂರಿ ಸ್ವಾಗತ:** ಈ ಹಿಂದೆ ಮೋದಿಯವರು ಜನವರಿಯಲ್ಲಿ 2 ಬಾರಿ, ಫೆಬ್ರವರಿಯಲ್ಲಿ 3 ಬಾರಿ ರಾಜ್ಯಕ್ಕೆ ಭೇಟಿ ನೀಡಿದ್ದು, 2023ರಲ್ಲಿ ಮೋದಿ ರಾಜ್ಯಕ್ಕೆ ನೀಡುತ್ತಿರುವ 6ನೇ ಭೇಟಿ ಇದಾಗಿದೆ. ಮಂಡ್ಯ ಹಾಗೂ ಧಾರವಾಡಕ್ಕೆ ಭೇಟಿ ನೀಡಿದ ಮೋದಿಗೆ ಅದ್ದೂರಿ ಸ್ವಾಗತ ಕೋರಲಾಯಿತು..

ಮಂಡ್ಯದಲ್ಲಿ ಮೈಸೂರು ಪೇಟ ತೊಡಿಸಿ, ಮಂಡ್ಯದ ಸಾವಯವ ಬೆಲ್ಲ, ಮರದ ಒಂಟಿ ಸಲಗದ ಪ್ರತಿಮೆ ನೀಡಿ, ಮೈಸೂರು ಮಲ್ಲಿಗೆಯ ಹಾರ ಹಾಕಿ ಸ್ವಾಗತಿಸಲಾಯಿತು. ವಿಶ್ವ ಸಿರಿಧಾನ್ಯ ವರ್ಷಾಚರಣೆ ಹಿನ್ನೆಲೆಯಲ್ಲಿ ಧಾರವಾಡದಲ್ಲಿ ಸಿರಿಧಾನ್ಯಗಳಿಂದ ಮೋದಿ ಅವರನ್ನು ಸ್ವಾಗತಿಸಿದ್ದು ವಿಶೇಷವಾಗಿತ್ತು. ಜೊತೆಗೆ, ಹಾವೇರಿಯ ಏಲಕ್ಕಿ ಹಾರ ಹಾಕಿ, ಮುತ್ತಿನಿಂದ ಅಲಂಕರಿಸಿದ ಪೇಟ ತೊಡಿಸಿ, ಧಾರವಾಡ ಕಸೂತಿ ಶಾಲು ಹೊದಿಸಿ, ಸಿದ್ಧಾರೂಢರ ವಿಗ್ರಹ, ಕಲಘಟಗಿಯ ಆಕರ್ಷಕ ತೊಟ್ಟಿಲು ಹಾಗೂ ಧಾರವಾಡ ಪೇಡಾ ನೀಡಿ ಸತ್ಕರಿಸಲಾಯಿತು.

ಎಲ್ಲೆಡೆ ಮೋದಿ.. ಮೋದಿ.. ಎಂಬ ಜಯಘೋಷಗಳು ಕೇಳಿ ಬಂದವು. ಅವರ ಭಾವಚಿತ್ರವನ್ನು ಕೈಯಲ್ಲಿ ಹಿಡಿದು ಘೋಷಣೆ ಕೂಗಿ ಮೋದಿ ಅವರ ಗಮನ ಸೆಳೆಯಲು ಪ್ರಯತ್ನಗಳೂ ನಡೆದವು. ಕೆಲವು ಮಹಿಳೆಯರಂತೂ ದೂರದಿಂದಲೇ ಮೋದಿ ಅವರಿಗೆ ಆರತಿ ಎತ್ತಿ ಹರಿಸಿದರು. ಎಲ್ಲೆಡೆ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು.